ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ. ಯವರ ನ್ಯಾಯಾಲಯ,
ಕುಂದಾಪುರ

ಸಿ.ಸಿ. ನಂಬ್ರ:1603/2018

ಚಾಸಾ: 3 ಪ್ರಾಸಾ:3

ದಿನಾಂಕ: 17-02-2023

| | | |
|---|---|---|
| ವಾಗ್ಮೂಲದವರ ಹೆಸರು | : | ಶ್ರೀ ಅಂಕಿತ್ |
| ತಂದೆಯ ಹೆಸರು | : | ನವೀನ್ ಚಂದ್ರ ಶೆಟ್ಟಿ |
| ವಯಸ್ಸು | : | 30 ವರ್ಷ |
| ಉದ್ಯೋಗ | : | ವ್ಯಾಪಾರ |
| ವಾಸ ಸ್ಥಳ | : | ಕುಂದಾಪುರ |

ಸಾಕ್ಷಿಯನ್ನು ಪ್ರಮಾಣೀಕರಿಸಲಾಯಿತು.

**ಮುಖ್ಯ ವಿಚಾರಣೆ: ಮಾನ್ಯ ಸ.ಸ.ಅ.ರವರಿಂದ:**

ದಿನಾಂಕ 23-11-2017 ರಂದು ಪೊಲೀಸರು ಘಟನಾ ಸ್ಥಳಕ್ಕೆ ಬಂದಿದ್ದು, ಚಾಸಾ-1 ಸ್ಥಳವನ್ನು ತೋರಿಸಿಕೊಟ್ಟಿದ್ದು, ಸಂಜೆ 4 ಗಂಟೆ ಸಮಯದಲ್ಲಿ ಮಹಜರು ಮಾಡಿರುತ್ತಾರೆ. ಸದ್ರಿ ಮಹಜರಿಗೆ ನಾನು ಸಹಿ ಮಾಡಿರುತ್ತೇನೆ. ಸಾಕ್ಷಿ ಸದ್ರಿ ದಾಖಲೆಯನ್ನು ನೋಡಿ ಗುರುತಿಸಿದ ಮೇರೆಗೆ ಅದನ್ನು ಈಗಾಗಲೇ ನಿಪಿ-2 ಎಂದು ಗುರುತಿಸಲಾಗಿದ್ದು ಅದರಲ್ಲಿನ ಸಾಕ್ಷಿಯ ಸಹಿಯನ್ನು ನಿಪಿ-2(ಬಿ) ಎಂದು ಗುರುತಿಸಲಾಯಿತು.

**ಪಾಟೀ ಸವಾಲು: 1 ನೇ ಆರೋಪಿತರ ಪರ ಶ್ರೀ ಕೆ ಎಂ ಐ ವಕೀಲರವರಿಂದ:**

ಚಾಸಾ-1 ನನಗೆ ಸಂಬಂಧಿಕರು. ಚಾಸಾ-1 ನನ್ನ ಸಂಬಂಧಿಕರಾಗಿದ್ದರಿಂದ ಅವರು ಒಂದು ಸಹಿ ಮಾಡಲು ಕೇಳಿದ ಮೇರೆಗೆ ಸಹಿ ಮಾಡಿರುತ್ತೇನೆ . ನಿಪಿ-2 ರಲ್ಲಿ ಏನು ಬರೆದಿದೆ ಎಂದು ನನಗೆ ಗೊತ್ತಿಲ್ಲ. ನನ್ನನ್ನು ಪೊಲೀಸರು ವಿಚಾರಣೆ ಮಾಡಿರುವುದಿಲ್ಲ.ಚಾಸಾ-1 ರವರು ಪೊಲೀಸರಿಗೆ ಯಾವುದೇ ಸ್ಥಳವನ್ನು ತೋರಿಸಿ ಕೊಟ್ಟಿಲ್ಲ. ನಾನು ಯಾವುದೇ ಸ್ಥಳವನ್ನು ಪೊಲೀಸರಿಗೆ ತೋರಿಸಿ ಕೊಟ್ಟಿಲ್ಲ. ನನ್ನ ಸಮಕ್ಷಮದಲ್ಲಿ ಪೊಲೀಸರು ಬೇರೆ ಯಾರನ್ನೂ

ವಿಚಾರಣೆ ಮಾಡಿರುವುದಿಲ್ಲ. ನಿಪಿ-2 ನ್ನು ಯಾವಾಗ ತಯಾರಿಸಲಾಗಿದೆ ಎಂದು ನನಗೆ ಗೊತ್ತಿಲ್ಲ. ನನ್ನ ಮುಖ್ಯ ವಿಚಾರಣೆಯಲ್ಲಿ ಹೇಳಿದ ಸಂಗತಿಗಳು ಸುಳ್ಳು ಎಂದರೆ ಸರಿಯಲ್ಲ.

**ಪಾಟೀ ಸವಾಲುಃ 2 ನೇ ಆರೋಪಿ ಪರವಾಗಿ ಃ ಶ್ರೀ ಆರ್.ಕೆ.ಎಂ. ವಕೀಲರಿಂದ**

**2 ನೇ ಆರೋಪಿ ಪರ ವಕೀಲರು 1 ನೇ ಆರೋಪಿ ಪರ ವಕೀಲರು ಮಾಡಿದ ಪಾಟೀ ಸವಾಲನ್ನು ಅಳವಡಿಸಿಕೊಂಡಿರುತ್ತಾರೆ.**

**ಮರು ವಿಚಾರಣೆಃ** ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓದಿ ಹೇಳಿ ಕೇಳಿ ಸರಿ ಇದೆ

**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು
ಪ್ರ. ದ. ನ್ಯಾ. ದಂ. ಕುಂದಾಪುರ. C/c**